ದಿನಾಂಕ : DATE : 23/12/20
ಪತ್ರಿಕೆಯ ಹೆಸರು : NAME OF THE NEWS PAPER:
ವಿಷಯ / DEPARTMENT / SUBJECT:

# ಬಿಡಿಎನಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಬಯಲು

## ಹೊಸಕೆರೆಹಳ್ಳಿಯ ಗುಡಿಸಲು ನಿವಾಸಿಗಳನ್ನು ಒಕ್ಕಲೆಬ್ಬಿಸಿದ್ದ ಬಿಡಿಎ | ಅವರಿಗೆ ವಿವಿಧೆಡೆ 541 ನಿವೇಶನ ಹಂಚಿಕೆ 32 ಅನರ್ಹರ ಹೆಸರು ಸೇರಿಸಿ ಅಕ್ರಮ | ಬಿಡಿಎಗೆ ಕೋಟ್ಯಂತರ ರುಪಾಯಿ ನಷ್ಟ | 9 ಅಧಿಕಾರಿಗಳಿಗೆ ನೋಟಿಸ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು 23/12/20

ಬನಶಂಕರಿ ಮೂರನೇ ಹಂತದ ಹೊಸಕೆರೆ ಹಳ್ಳಿ ಗ್ರಾಮದಲ್ಲಿಫಲಾನುಭವಿಗಳಲ್ಲದವರಿಗೆಅಕ್ರಮವಾಗಿ ನಿವೇಶನ ಹಂಚಿಕೆ ಮಾಡಿ ಪ್ರಾಧಿಕಾರಕ್ಕೆ ಕೋಟ್ಯಂತರ ರುಪಾಯಿ ವಂಚಿಸಿದ ಆರೋಪದಡಿ ಒಂಬತ್ತು ಮಂದಿ ಅಧಿಕಾರಿ, ಸಿಬ್ಬಂದಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಬಿಡಿಎ) ಆಯುಕ್ತ ಡಾ| ಮಹದೇವ ನೋಟಿಸ್ ಜಾರಿಗೊಳಿಸಿದ್ದಾರೆ.

ಕೆಐಡಿಬಿ ವಿಶೇಷ ಭೂಸ್ವಾಧೀನ ಅಧಿಕಾರಿ (ಬಿಡಿಎ ಹಿಂದಿನಉಪಕಾರ್ಯದರ್ಶಿ-3) ಅನಿಲ್‌ಕುಮಾರ್, ಜೈವಿಕ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಆಡಳಿತಾಧಿಕಾರಿ (ಬಿಡಿಎ ಹಿಂದಿನ ಉಪ ಕಾರ್ಯದರ್ಶಿ-1) ಡಾ| ಬಿ.ಸುಧಾ, ಉಪಕಾರ್ಯದರ್ಶಿ-1 ವಿಭಾಗದ ವಿಷಯ ನಿರ್ವಾಹಕ ಸಂಜಯ್‌ಕುಮಾರ್, ಪ್ರಸ್ತುತ ಕಂದಾಯ ವಿಭಾಗ (ಉತ್ತರ)ದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪ ಕಾರ್ಯದರ್ಶಿ-1ರ ವಿಭಾಗದ ಮೇಲ್ವಿಚಾರಕ ಕೆ.ಎಂ.ರವಿಶಂಕರ್, ಪ್ರಸ್ತುತ ಕಂದಾಯ ವಿಭಾಗ (ಪಶ್ಚಿಮ)ದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಕಾರ್ಯದರ್ಶಿ-1ರ ಮೇಲ್ವಿಚಾರಕ ಅಶ್ವತ್ಥ್ ನಾರಾಯಣ, ಉಪ ಕಾರ್ಯದರ್ಶಿ-3ರ ಮೇಲ್ವಿಚಾರಕಿ (ಪ್ರಸ್ತುತ ದಾಖಲೆ ವಿಭಾಗ) ವಿ. ಮಹದೇವಮ್ಮ, ಉಪಕಾರ್ಯದರ್ಶಿ-3ರವಿಭಾಗದ ನಿವೃತ್ತ 2ನೇ ದರ್ಜೆ ಸಹಾಯಕ ಮುನಿ ಬಚ್ಚೇಗೌಡ, ಪ್ರಸ್ತುತ ಅಮಾನತ್ತಿನಲ್ಲಿರುವ ಉಪ ಕಾರ್ಯದರ್ಶಿ-3ರ ವಿಭಾಗದ ಮೇಲ್ವಿಚಾರಕಿ ಎಂ.ವಿ.ಕಮಲಾ, ಪ್ರಸ್ತುತ ಕಂದಾಯ ವಿಭಾಗ (ಪಶ್ಚಿಮ)ದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅಮಾನತ್ತಿನಲ್ಲಿರುವ 2ನೇ ದರ್ಜೆ ಸಹಾಯಕ ವೆಂಕಟರಮಣಪ್ಪ ಅವರಿಗೆ ನೋಟಿಸ್ ಜಾರಿ ಮಾಡಲಾಗಿದೆ.

**ಪ್ರಕರಣದ ವಿವರ:** ಬನಶಂಕರಿ ಮೂರನೇ ಹಂತದ ಹೊಸಕೆರೆಹಳ್ಳಿ ಗ್ರಾಮದ ಸರ್ವೆ ನಂ.89, 90, 91 ಮತ್ತು 94ರಲ್ಲಿ ವಾಸ ಮಾಡುತ್ತಿದ್ದ ಗುಡಿಸಲು ನಿವಾಸಿಗಳನ್ನು ಒಕ್ಕಲೆಬ್ಬಿಸಿ, ಒಟ್ಟು 541 ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲು ತೀರ್ಮಾನಿಸಲಾಗಿತ್ತು. ಸರ್ವೆ ನಂ 90ರಲ್ಲಿ 238 ನಿವೇಶನಗಳು ಮಾತ್ರ ಲಭ್ಯವಾಗಿತ್ತು. ಹಾಗಾಗಿ ಸರ್ಕಾರದ ಅನುಮತಿ ಮೇರೆಗೆ 2005ರಲ್ಲಿ ಪ್ರತಿ ಫಲಾನುಭವಿಗೆ 20/30 ಅಡಿ ಅಳತೆಯಂತೆ ಒಟ್ಟು 238 ಫಲಾನುಭವಿಗಳಿಗೆ ಮೊದಲ ಹಂತದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿತ್ತು.

ಒಕ್ಕಲೆಬ್ಬಿಸಿದ್ದ ಗುಡಿಸಲು ನಿವಾಸಿಗಳ ಸಂಘದ ಮನವಿ ಮೇರೆಗೆ ಅರ್ಹ 180 ಮಂದಿ ಫಲಾನುಭವಿಗಳನ್ನು ಗುರುತಿಸಿ ಪ್ರಾಧಿಕಾರದ ಇತರೆ ಬಡಾವಣೆಗಳಲ್ಲಿ 20/30 ಅಡಿ ಅಳತೆಯ ನಿವೇಶನಗಳನ್ನು ಪುನರ್ವಸತಿ ಯೋಜನೆಯಡಿ ಹಂಚಿಕೆ ಮಾಡಲು ಯೋಜಿಸಲಾಗಿತ್ತು. ಅರ್ಹ ಫಲಾನುಭವಿಗಳಿಗೆ ಮಾತ್ರ ಚಾಲ್ತಿಯಲ್ಲಿದ್ದ ನಿಯಮಾವಳಿಯಂತೆ ದರ ವಿಧಿಸಿ ನಿವೇಶನಗಳನ್ನು ಹಂಚಿಕೆ ಮಾಡಲು ಸರ್ಕಾರ ಅನುಮೋದನೆ ನೀಡಿತ್ತು.

ಆದರೆ ಅನುಮೋದಿತ 180 ಫಲಾನುಭವಿಗಳ ಪಟ್ಟಿಯಲ್ಲಿರದ 32 ಅನರ್ಹ ಫಲಾನುಭವಿಗಳಿಗೆ ಅಕ್ರಮವಾಗಿ ಮತ್ತು ನಿಯಮಬಾಹಿರವಾಗಿ ನಿವೇಶನಗಳನ್ನು ಹಂಚಿಕೆಮಾಡಿ ಪ್ರಾಧಿಕಾರಕ್ಕೆ ವಂಚನೆ ಮಾಡಿರುವುದು ಬಿಡಿಎ ವಿಶೇಷ ಕಾರ್ಯನಿರತ ಪಡೆಯ ಆರಕ್ಷಕ ಉಪಾಧೀಕ್ಷಕರ ತನಿಖೆಯಿಂದ ಬೆಳಕಿಗೆ ಬಂದಿತ್ತು. ಜತೆಗೆ ಅನರ್ಹ ಫಲಾನುಭವಿಗಳಲ್ಲಿ ಕೆಲವರಿಗೆ ಒಂದಕ್ಕಿಂತ ಹೆಚ್ಚು ನಿವೇಶನಗಳನ್ನು ಹಂಚಿಕೆ ಮಾಡಿರುವುದು ತನಿಖೆಯಲ್ಲಿ ಪತ್ತೆಯಾಗಿದೆ. ಈ ಒಂದೇ ಪ್ರಕರಣದಲ್ಲಿ ಬೇರೆ ಬೇರೆ ವ್ಯಕ್ತಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಿದ ಪ್ರಕರಣಗಳಲ್ಲಿ ಬಿಡಿಎ ಅಧಿಕಾರಿ ಮತ್ತು ಸಿಬ್ಬಂದಿ ಭಾಗಿಯಾಗಿರುವುದು ಪತ್ತೆಯಾದ ಹಿನ್ನೆಲೆಯಲ್ಲಿ ನೋಟಿಸ್ ಜಾರಿ ಮಾಡಲಾಗಿದೆ ಎಂದು ಬಿಡಿಎ ಮೂಲಗಳು ಮಾಹಿತಿ ನೀಡಿವೆ.

# ಬಿಡಿಎ ಹಗರಣಗಳ ತನಿಖೆಗೆ ಎಸ್‌ಐಟಿ ರಚಿಸಿ

## ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಬಿಡಿಎ ಅಧ್ಯಕ್ಷ ಎಸ್.ಆರ್.ವಿಶ್ವನಾಥ್ ಮನವಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ (ಬಿಡಿಎ) 1985ರಿಂದ ಇಲ್ಲಿಯವರೆಗೆ ನಡೆದಿರುವ ಪ್ರಮುಖ ಹಗರಣಗಳ ತನಿಖೆಗೆ ವಿಶೇಷ ತನಿಖಾ ತಂಡ (ಎಸ್ ಐಟಿ) ರಚಿಸುವಂತೆ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ವಿಶ್ವನಾಥ್ ಅವರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಮನವಿ ಮಾಡಿದ್ದಾರೆ.

ಮಂಗಳವಾರ ಗೃಹಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡಿಎ ಆಯುಕ್ತರು ಹಾಗೂ ಅಧಿಕಾರಿಗಳ ಹೆಸರಿನಲ್ಲಿ ದಾಖಲೆಗಳನ್ನು ಸೃಷ್ಟಿಸಿ ನಿವೇಶನಗಳನ್ನು ಹಂಚಿಕೆ ಮಾಡಲು ಸಿದ್ಧತೆ ನಡೆಸಿದ್ದ ಜಾಲವನ್ನು ಪತ್ತೆ ಮಾಡಲಾಗಿದೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ ಆರು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎಸ್‌ಐಟಿ ರಚಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲು ಪ್ರಾಧಿಕಾರದ ಆಡಳಿತ ಮಂಡಳಿ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಅವರು ಹೇಳಿದರು.



ಹಲವು ವರ್ಷಗಳಿಂದ ಬಿಡಿಎ ಅಧಿಕಾರಿಗಳು ಪ್ರಾಧಿಕಾರಕ್ಕೆ ಸೇರಿದ ಸಾವಿರಾರು ಕೋಟಿ ರುಪಾಯಿ ಮೌಲ್ಯದ ನಿವೇಶನಗಳನ್ನು ಏಜೆಂಟರ ಜೊತೆ ಶಾಮೀಲಾಗಿ ಪಟ್ಟಭದ್ರ ಹಿತಾಸಕ್ತಿಗಳಿಗೆ ಮಾರಾಟ ಮಾಡುತ್ತಿದ್ದರು. ಇದೀಗ ನಕಲಿ ದಾಖಲೆ ಸೃಷ್ಟಿಸಿ ನಿವೇಶನಗಳನ್ನು ಹಂಚಿಕೆ ಮಾಡಲು ಹೊರಟಿದ್ದ ಪ್ರಕರಣವು ಬಿಡಿಎಗೆ ಒಂದು ಬಹುದೊಡ್ಡ ಕಪ್ಪುಚುಕ್ಕೆಯಾಗಿದೆ. ಭ್ರಷ್ಟ ಅಧಿಕಾರಿಗಳಿಂದ ಸಾರ್ವಜನಿಕರಲ್ಲಿ ಪ್ರಾಧಿಕಾರದ ಬಗ್ಗೆ ಇದ್ದ ವಿಶ್ವಾಸ ಹೊರಟು ಹೋಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಾಗಾಗಿ 1985ರಿಂದ ಇಲ್ಲಿವರೆಗೆ ನಡೆದಿರುವ ಹಗರಣಗಳ ತನಿಖೆ ನಡೆಸಲು ವಿಶೇಷ ತನಿಖಾ ತಂಡವನ್ನು ರಚನೆ ಮಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಆಯುಕ್ತರಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸಿಎಂ ಸೂಚಿಸಿದ್ದಾರೆ. ಇನ್ನೆರಡು ಮೂರು ದಿನಗಳಲ್ಲಿ ಆಯುಕ್ತರು ಎಸ್‌ಐಟಿಗೆ ವಹಿಸಬಹುದಾದ ಹಗರಣಗಳ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಮನವಿ ಸಲ್ಲಿಸಲಿದ್ದಾರೆ. ಇದನ್ನು ಮುಖ್ಯಮಂತ್ರಿಗಳು ಪರಿಶೀಲಿಸಿ ಎಸ್‌ಐಟಿ ರಚನೆ ಮತ್ತು ಅದರ ಸ್ವರೂಪದ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.